2266 (2489) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ):– ಮಾನ್ಯ ಸದಸ್ಯರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ನಗರದಲ್ಲಿರುವ ಕಲ್ಯಾಣ ಮಂಟಪಗಳಲ್ಲಿ ನಡೆಯುವ ಮದುವೆ ಕಾರ್ಯಕ್ರಮಗಳಲ್ಲಿ ಆರ್ಕೆಸ್ಟ್ರಾ ಮತ್ತು ವಾದ್ಯಗಳಿಂದ ಬರುತ್ತಿರುವ ಶಬ್ಧ ಮಾಲಿನ್ಯದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸಾರ್ವಜನಿಕರಿಗೆ ಹಾಗೂ ಮುಖ್ಯವಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು ಈ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ;

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು):

ಅ&ಆ) ಕಲ್ಯಾಣ ಮಂಟಪದ ಮಾಲೀಕರುಗಳಿಗೆ ಮದುವೆ ಕಾರ್ಯಕ್ರಮಗಳಲ್ಲಿ ಆರ್ಕೆಸ್ಟ್ರ ಮತ್ತು ವಾದ್ಯಗಳನ್ನು ಬಾಕ್ಸ್ ಮಾದರಿಯ ಸ್ಪೀಕರ್‌ಗಳನ್ನು ಇಟ್ಟುಕೊಂಡು ಕಾರ್ಯಕ್ರಮ ನಡೆಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ. ಈ ಬಗ್ಗೆ ವಿದ್ಯಾರ್ಥಿಗಳಿಂದಾಗಲೀ ಅಥವಾ ಸಾರ್ವಜನಿಕ–ರಿಂದಾಗಲೀ ದೂರುಗಳು ಬಂದಲ್ಲಿ ಸಂಬಂಧಪಟ್ಟ ಕಲ್ಯಾಣ ಮಂಟಪದ ಮಾಲೀಕರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುವುದು.

2267(2493) ಶ್ರೀ ಬಾಲಕೃಷ್ಣ ಹೆಚ್. ಸಿ. (ಮಾಗಡಿ):– ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾಗಡಿ ತಾಲ್ಲೂಕಿನ ಕೋರಮಂಗಲ ಹಾಗೂ ತೂಬಿಕೆರೆ ಗ್ರಾಮಗಳಲ್ಲಿ ಹೊಸ ಕೆರೆಗಳನ್ನು ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು;

ಆ) ಈ ಕಾಮಗಾರಿಗಳಿಗೆ 2005–06ನೇ ಸಾಲಿನ ಆಯವ್ಯಯದಲ್ಲಿ ಹಣ ನೀಡಲಾಗುವುದೇ; ವಿವರ ನೀಡುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ:– (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಕೋರಮಂಗಲ ಕೆರೆಯನ್ನು ಅನುದಾನದ ಕೊರತೆಯಿಂದ ಕಾಮಗಾರಿಯನ್ನು ಮುಂದುವರಿಸಲು ಸಾಧ್ಯವಾಗುತ್ತಿಲ್ಲ. ತೂಬಿನಕೆರೆ ಎನ್ನೂ ಮಂಜೂರು ಆಗಿರುವುದುದಿಲ್ಲ.

ಆ) ಅನುದಾನದ ಲಭ್ಯತೆ ಮೇಲೆ ಕೋರಮಂಗಲ ಕೆರೆ ಕಾಮಗಾರಿಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

2268(2824) ಶ್ರೀ ಭರಮಗೌಡ (ರಾಜು) ಅಲಗೌಡ ಕಾಗೆ:– ಮಾನ್ಯ ಜಲಸಂಪನ್ಮೂಲ ಹಾಗೂ ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿಪ್ಪರಗಿ ಜಲಾಶಯದಲ್ಲಿ ನೀರು ನಿಲ್ಲಿಸಲಾಗಿದ್ದು, ನೀರಿನ ಪ್ರಮಾಣ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಅಥಣಿ, ರಾಯಬಾಗ ಹಾಗೂ ಜಮಖಂಡಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಅಭಾವ ಪ್ರಾರಂಭವಾಗಿದ್ದು, ಈ ಅಭಾವ ನೀಗಿಸಲು ಸರ್ಕಾರದ ಕಾರ್ಯಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ:- (ಕಾಗವಾಡ)

ಅ) ಬಂದಿದೆ:-

ಆ) ಬೇಸಿಗೆಯಲ್ಲಿ ಕೃಷ್ಣಾ ನದಿಯು ಬತ್ತಿ ಹೋದಾಗ ಬೆಳಗಾಂ ಜಿಲ್ಲೆಯ ರಾಯಬಾಗ್, ಅಥಣಿ ಮುಂತಾದ ತಾಲ್ಲೂಕುಗಳಲ್ಲಿನ ಪಟ್ಟಣಗಳು ಹಾಗೂ ಗ್ರಾಮಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಸಹರಿಸಲು ಮತ್ತು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನಲ್ಲಿಯೂ ಸಹ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಮಹಾರಾಷ್ಟ್ರದ ಕೋಯ್ನಾ ಅಥವಾ ವಾರ್ಣಾ ಜಲಾಶಯಗಳಿಂದ ಕೃಷ್ಣಾ ನದಿಗೆ ಕೋರಿಕೆಯ ಮೇರೆಗೆ ನೀರನ್ನು ನೀರಿನ ಕರ ಪಾವತಿಸಿ ಬಿಡಿಸಿಕೊಳ್ಳಲಾಗುತ್ತಿದೆ.

ಮಹಾರಾಷ್ಟ್ರದ ಕಾಳಮ್ಮವಾಡಿ ಬ್ಯಾರೇಜಿನಿಂದ ಉಭಯ ರಾಜ್ಯಗಳ ನಡುವೆ ದೂದ್‌ಗಂಗಾ ನದಿ ನೀರಿನ ಹಂಚಿಕೆಯ ಕುರಿತು ಮಾಡಿಕೊಂಡಿರುವ ಒಪ್ಪಂದದಂತೆ ದೂದ್‌ಗಂಗಾ ನದಿಯ ಮೂಲಕ ಕೃಷ್ಣಾ ನದಿಗೆ ನೀರನ್ನು ಬಿಡಿಸಿಕೊಳ್ಳಲಾಗುತ್ತಿದೆ. ಇದಲ್ಲದೆ, ನಮ್ಮ ರಾಜ್ಯದ ಹಿಡಕಲ್ ಜಲಾಶಯದಲ್ಲಿನ ನೀರಿನ ಸಂಗ್ರಹಣೆಯಿಂದ ಸಹ ಕೃಷ್ಣಾ ನದಿಗೆ ನೀರನ್ನು ಬಿಡಲಾಗುತ್ತಿದೆ.

2269(2825) ಶ್ರೀ ಜಿ. ಬಸವಣ್ಣೆಪ್ಪ (ಹೊಳೆಹೊನ್ನೂರು):- ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ಒಟ್ಟು ನಗರ ಸಭೆ; ಪುರಸಭೆ; ಪಟ್ಟಣ ಪಂಚಾಯತಿಗಳ ಸಂಖ್ಯೆ ಎಷ್ಟು;

ಆ) ಹೊಸ ನಗರಸಭೆ; ಪುರಸಭೆ; ಪಟ್ಟಣ ಪಂಚಾಯತಿಗಳ ರಚನೆಗೆ ಸರ್ಕಾರ ಆಲೋಚಿಸಿದೆಯೆ;

ಇ) ಅವುಗಳ ರಚನೆಯಿಂದ ಸರ್ಕಾರಕ್ಕೆ ಉಂಟಾಗುವ ಅನುಕೂಲವೇನು?

ಶ್ರೀ ಎಸ್. ಆರ್. ಮೋರೆ:- ಪೌರಾಡಳೀತ ಹಾಗೂ (ಕೆ.ಯು.ಐ.ಡಿ.ಎಫ್.ಸಿ ಸಚಿವರು)

ಅ) 1) ನಗಸಭೆಗಳೂ–43

2) ಪುರಸಭೆಗಳು–79

3) ಪಟ್ಟಣ ಪಂಚಾಯತಿಗಳು–93

ಆ) ಹೌದು, ಆದರೆ,

ಲೋಕಸಭಾ ಹಾಗೂ ವಿಧಾನಸಭಾ ಕ್ಷೇತ್ರ ವಿಂಗಡಣೆ ಕಾರ್ಯ ಪ್ರಗತಿಯಲ್ಲಿರುವುದರಿಂದ ಯಾವುದೇ ಕ್ಷೇತ್ರದ ಪುನರ್ ವಿಂಗಡಣೆ ಕಾರ್ಯವನ್ನು ಕೇಂದ್ರ ಸರ್ಕಾರದ ಡಿಲಿಮಿಟೇಷನ್ ಕಮಿಷನ್ ನವದೆಹಲಿ ಇವರ ಸಹಮತಿ ಇಲ್ಲದೆ ಮಾಡಬಾರದೆಂದು ನಿರ್ದೇಶನವಿರುವುದರಿಂದ ಅದರ ಸಹಮತಿಯನ್ನು ಕೋರಿ ಈಗಾಗಲೇ ಪತ್ರ ಬರೆಯಲಾಗಿದೆ, ಸಹಮತಿಯನ್ನು ನೀಡಿದ ತಕ್ಷಣ ಸದರಿ ವಿಷಯವನ್ನು ನಿಯಮಾನುಸಾರ ಪರಿಶೀಲಿಸಲಾಗುವುದು.

ಇ) ಏನು ಇಲ್ಲ.